ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಕೋವಿಡ್-19 ಪರೀಕ್ಷೆಯ ಬಗ್ಗೆ

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

879 (906) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೋವಿಡ್-19 ರೋಗ ಪ್ರಾರಂಭವಾದ ದಿನದಿಂದ ಇಲ್ಲಿಯವರೆಗೆ ಬೀದರ್ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಎಷ್ಟು ಜನರಿಗೆ ಕೋವಿಡ್-19 ಪರೀಕ್ಷೆ ನಡೆಸಲಾಗಿದೆ; ಎಷ್ಟು ಜನರಿಗೆ ಪಾಸಿಟೀವ್ ಬಂದಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಪಾಸಿಟೀವ್ ಬಂದ ರೋಗಿಗಳಿಗೆ ಔಷಧಿಗಳನ್ನು ನೀಡಲು ಸರ್ಕಾರ ಎಷ್ಟು ಹಣ ಖರ್ಚು ಮಾಡಿದೆ; ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ಖಾಸಗಿ ಆಸ್ಪತ್ರೆಗಳಲ್ಲಿ ಕೊರೋನ ಬಂದ ರೋಗಿಗಳಿಗೆ ಅತಿ ಹೆಚ್ಚಾಗಿ ಹಣ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು?